**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ಪ್ರತಾಪ್‌ಸಿಂಹ ನಾಯಕ್ ಇವರು ನಿಯಮ 330 ರಡಿ ಮಂಡಿಸಿರುವ ಸೂಚನೆಗೆ ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರ ಉತ್ತರ:**

**ಪ್ರಶ್ನೆ**

ರಾಜ್ಯದ, ಹಲವಾರು ನಗರ ಸ್ಥಳೀಯ ಸಂಸ್ಥೆ(ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರಸಭೆ)ಗಳಿಗೆ ಅವುಗಳ ಐದು ವರ್ಷದ ಅಧಿಕಾರಾವಧಿ ಈಗಾಗಲೇ ಮುಕ್ತಾಯಗೊಂಡು, ಸಾಕಷ್ಟು ಸಮಯ ಕಳೆದಿದ್ದರೂ ಇನ್ನೂ ಸಹ ಚುನಾವಣೆ ನಡೆಯದಿರುವುದರಿಂದ, ಪ್ರತಿ ವರ್ಷ ಕೇಂದ್ರ ಸರ್ಕಾರದಿಂದ ಬರುತ್ತಿದ್ದ ಕೋಟ್ಯಾಂತರ ರೂ. ಅನುದಾನವನ್ನು ಕಳೆದುಕೊಳ್ಳುವುದರ ಜೊತೆಗೆ ಪ್ರಜಾಪ್ರಭುತ್ವದ ಬೇರುಗಳು ದುರ್ಬಲವಾಗುತ್ತಿವೆ. ರಾಜ್ಯದಲ್ಲಿ, ನಿಗದಿತ ಅವಧಿಯೊಳಗೆ ಚುನಾವಣೆ ನಡೆಸದೆ ಆಡಳಿತಾಧಿಕಾರಿಗಳನ್ನು ನೇಮಕ ಮಾಡಲಾಗಿರುವ ಕಾರಣದಿಂದಾಗಿ ಹಲವಾರು ನಗರ ಸ್ಥಳೀಯ ಸಂಸ್ಥೆಗಳು ದೀರ್ಘಕಾಲದಿಂದ ಜನಪ್ರತಿನಿಧಿಗಳೇ ಇಲ್ಲದೆ ಆಡಳಿತಾಧಿಕಾರಿಗಳ ದರ್ಬಾರ್‌ಗೆ ಒಳಗಾಗಿವೆ. ಸದರಿ ಎಲ್ಲಾ ನಗರ ಸ್ಥಳೀಯ ಸಂಸ್ಥೆ(ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರಸಭೆ) ಗಳಿಗೆ ಚುನಾವಣೆ ನಡೆಸಲು ಸರ್ಕಾರ ಇದುವರೆಗೆ ಯಾವುದೇ ಅಗತ್ಯ ಕ್ರಮವಹಿಸದೇ ಅತ್ಯಂತ ನಿರ್ಲಕ್ಷ್ಯ ವಹಿಸಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಉತ್ತರ**

ಕರ್ನಾಟಕ ಪುರಸಭೆಗಳ ಅಧಿನಿಯಮ 1964ರ ನಿಯಮ 11ರ ಉಪಕಲಂ 2, 3 ಮತ್ತು 4ರಲ್ಲಿ ತಿಳಿಸಿರುವಂತೆ ಹಾಗೂ ಸರ್ಕಾರದ ಆದೇಶ ಸಂಖ್ಯೆ:ನಅಇ 240 ಎಂಎಲ್‌ಆರ್ 2013 ದಿ:18.12.2013 ರಲ್ಲಿ ಹಾಗೂ ತಿದ್ದುಪಡಿ ಅಧಿಸೂಚನೆ ಸಂಖ್ಯೆ:ನಅಇ 21 ಎಂಎಲ್‌ಆರ್ 2016, ದಿನಾಂಕ:09.02.2016ರಲ್ಲಿ ಹೊರಡಿಸಲಾಗಿರುವ ಮಾರ್ಗಸೂಚಿಗಳನ್ವಯ ವಾರ್ಡುವಾರು ಮೀಸಲಾತಿಯನ್ನು ನಿಗಧಿಪಡಿಸಿ, ಪ್ರಥಮವಾಗಿ ಕರಡು ಅಧಿಸೂಚನೆಯನ್ನು ಹೊರಡಿಸಿ, ಆಕ್ಷೇಪಣೆಗಳನ್ನು ಪಡೆಯಲು 7 ದಿನಗಳ ಕಾಲಾವಕಾಶ ನೀಡಬೇಕಾಗುತ್ತದೆ. ತದನಂತರದಲ್ಲಿ ಅಂತಿಮ ಅಧಿಸೂಚನೆಯನ್ನು ಹೊರಡಿಸಿ, ಮುಂದಿನ ಕ್ರಮಕ್ಕಾಗಿ ಚುನಾವಣೆ ನಡೆಸಲು ರಾಜ್ಯ ಚುನಾವಣೆ ಆಯೋಗಕ್ಕೆ ಕಳುಹಿಸಬೇಕಾಗಿರುತ್ತದೆ.

ಅವಧಿ ಮುಕ್ತಾಯಗೊಂಡಿರುವ 187 ನಗರ ಸ್ಥಳೀಯ ಸಂಸ್ಥೆಗಳಿಗೆ ವಾರ್ಡ್‌ವಾರು ಮೀಸಲಾತಿ ನಿಗಧಿಪಡಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. ಈ ಪೈಕಿ ಪ್ರಸ್ತುತ 26 ನಗರ ಸ್ಥಳೀಯ ಸಂಸ್ಥೆಗಳಿಗೆ ಕರಡು ಮೀಸಲಾತಿಯನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ದಿನಾಂಕ:10.11.2025ರಂದು ಪ್ರಕಟಿಸಲಾಗಿದ್ದು, ಈ ಅಧಿಸೂಚನೆಯಿಂದ ಬಾದಿತರಾಗಿರುವವರಿಂದ ಆಕ್ಷೇಪಣೆ / ಸಲಹೆಗಳನ್ನು ಸಲ್ಲಿಸಲು 07 ದಿನಗಳ ಕಾಲಾವಕಾಶವನ್ನು ನೀಡಲಾಗಿರುತ್ತದೆ. ಸ್ವೀಕೃತವಾಗುವ ಆಕ್ಷೇಪಣೆ / ಸಲಹೆಗಳನ್ನು ಪರಿಶೀಲಿಸಿ ಅಂತಿಮಗೊಳಿಸುವ ಬಗ್ಗೆ ಕ್ರಮವಹಿಸಲಾಗುತ್ತಿದೆ. ಅಂತಿಮ ಅಧಿಸೂಚನೆ ಹೊರಡಿಸಿದ ನಂತರ ರಾಜ್ಯ ಚುನಾವಣಾ ಆಯೋಗದಿಂದ ಸಾರ್ವತ್ರಿಕ ಚುನಾವಣೆಗಳನ್ನು ನಡೆಸಲಾಗುತ್ತದೆ.

ಮುಂದುವರೆದು, ಸರ್ಕಾರದ ಅಧಿಸೂಚನೆ ಸಂ: ನಅಇ 287 ಎಂಎಲ್‌ಆರ್ 2025 ದಿನಾಂಕ 06.11.2025, 19.11.2025 ಹಾಗೂ 05.12.2025 ರಲ್ಲಿ ಕರ್ನಾಟಕ ಪೌರಸಭೆಗಳ ಕಾಯ್ದೆ 1964 ರ ಕಲಂ 389 ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಅವಧಿ ಮುಕ್ತಾಯಗೊಂಡಿರುವ ಸ್ಥಳೀಯ ಸಂಸ್ಥೆಗಳಲ್ಲಿ ಹೊಸದಾಗಿ ಚುನಾಯಿತ ಕೌನ್ಸಿಲ್ ಅಸ್ತಿತ್ವಕ್ಕೆ ಬರುವವರೆಗೂ ಅವುಗಳ ದಿನನಿತ್ಯದ ಕಾರ್ಯನಿರ್ವಹಣೆಗಾಗಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಆಡಳಿತ ಹಿತದೃಷ್ಟಿಯಿಂದ ಆಡಳಿತಾಧಿಕಾರಿಯನ್ನು ನೇಮಿಸಲಾಗಿರುತ್ತದೆ. ಇದರಿಂದಾಗಿ ನಗರಸಭೆ, ಪುರಸಭೆ ಹಾಗು ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗದಂತೆ ಕ್ರಮವಹಿಸಲಾಗಿರುತ್ತದೆ.

**ಸಂಖ್ಯೆ: ನಅಇ 49 ಎಲ್‌ಸಿಕ್ಯೂ 2025**

**(ರಹೀಂ ಖಾನ್)**
**ಪೌರಾಡಳಿತ ಮತ್ತು ಹಜ್ ಸಚಿವರು**